ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 67
2. ಮಾನ್ಯ ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ
3. ಉತ್ತರಿಸಬೇಕಾದ ದಿನಾಂಕ : 15.02.2022
4. ಉತ್ತರಿಸುವ ಸಚಿವರು : ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ಮೈಸೂರು ಸಕ್ಕರೆ ಕಾರ್ಖಾನೆಯನ್ನು ಪ್ರಾರಂಭಿಸದಿರುವುದರಿಂದ ಆ ಭಾಗದ ಕಬ್ಬು ಬೆಳೆಗಾರರು ತುಂಬಾ ತೊಂದರೆಗೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ದಿ ಮೈಸೂರು ಷುಗರ್ ಕಂಪನಿ ಲಿ., ಮಂಡ್ಯ ಈ ಕಾರ್ಖಾನೆಯಲ್ಲಿ 2019-20ನೇ ಹಂಗಾಮಿನಿಂದ ಕಬ್ಬು ಅರೆಯುವಿಕೆಯನ್ನು ಸ್ಥಗಿತಗೊಳಿಸಿರುವುದರಿಂದ, ಕಬ್ಬು ಬೆಳೆದ ರೈತರಿಗೆ ಉಂಟಾಗಬಹುದಾದ ನಷ್ಟವನ್ನು ತಪ್ಪಿಸುವುದಕ್ಕಾಗಿ, ಈ ಕಾರ್ಖಾನೆಯ ಕಬ್ಬು ಮೀಸಲು ಕ್ಷೇತ್ರದಲ್ಲಿ ಬೆಳೆದ ಅಂದಾಜು 7.00 ಲಕ್ಷ ಮೆ.ಟನ್ ಕಬ್ಬನ್ನು ಮಂಡ್ಯ ಜಿಲ್ಲೆಯಲ್ಲಿರುವ ಉಳಿದ 05 ಸಕ್ಕರೆ ಕಾರ್ಖಾನೆಗಳಿಗೆ ಹಂಚಿಕೆ ಮಾಡಿ ಸರ್ಕಾರದ ಆದೇಶ ಸಂಖ್ಯೆ: ಸಿಐ 240 ಸಿಓಎಫ್ 2021, ದಿನಾಂಕ: 18.09.2021ರಲ್ಲಿ ಆದೇಶಿಸಲಾಗಿದೆ. ದಿ ಮೈಸೂರು ಷುಗರ್ ಕಂಪನಿ ಲಿ, ಮಂಡ್ಯ _ ಈ ಕಾರ್ಖಾನೆಯಲ್ಲಿ ಕಬ್ಬು ಅರೆಯುವ ಕಾರ್ಯವನ್ನು ಪ್ರಾರಂಭಿಸುವವರೆಗೆ ಮಾತ್ರ ಈ ಆದೇಶವು ಜಾರಿಯಲ್ಲಿರುತ್ತದೆ.</td></tr>
<tr><td>(ಆ)</td><td>ಕಾರ್ಖಾನೆ ಪುನರಾರಂಭದ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸ್ಥಳೀಯ ಶಾಸಕರು, ಸಂಸದರು, ರೈತ ಮುಖಂಡರು ಹಾಗೂ ಸಂಘಟನೆಗಳೊಡನೆ ಸಭೆ ನಡೆಸಲಾಗಿದೆಯೇ;</td><td rowspan="2">ದಿ ಮೈಷುಗರ್ ಕಂಪನಿ ಲಿಮಿಟೆಡ್ ಮಂಡ್ಯ- ಈ ಕಾರ್ಖಾನೆಯ ಪುನಶ್ಚೇತನಗೊಳಿಸುವ ಕುರಿತು ದಿನಾಂಕ:18.10.2021ರಂದು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಭೆಯನ್ನು ಜರುಗಿಸಲಾಗಿರುತ್ತದೆ. ಸದರಿ ಸಭೆಯಲ್ಲಿ ಈ ಕೆಳಕಂಡ ತೀರ್ಮಾನಗಳನ್ನು ಕೈಗೊಳ್ಳಲಾಗಿದೆ.
1. ಎಲ್.ಆರ್.ಓ.ಟಿ. ಆಧಾರದ ಮೇಲೆ ಮೈಸೂರು ಸಕ್ಕರೆ ಕಾರ್ಖಾನೆಯನ್ನು ಖಾಸಗಿಯವರಿಗೆ ಗುತ್ತಿಗೆ ನೀಡುವ ಸಂಬಂಧ ಈ ಹಿಂದೆ ಆಗಿರುವ ಸಚಿವ ಸಂಪುಟದ ನಿರ್ಣಯಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿ ಸರ್ಕಾರಿ ಸ್ವಾಮ್ಯದಲ್ಲಿ ನಡೆಸಲು ಅನುಕೂಲವಾಗುವಂತೆ ನುರಿತ ತಾಂತ್ರಿಕ ಸಮಿತಿಯಿಂದ ವರದಿಯನ್ನು ಪಡೆದು, ಉನ್ನತ ಅಧಿಕಾರಿ ಹಾಗೂ ತಾಂತ್ರಿಕ ಸಿಬ್ಬಂದಿ ಹಾಗೂ ನುರಿತ ಆರ್ಥಿಕ ಸಲಹೆಗಾರರನ್ನು ನೇಮಿಸಿ ಮುಂದಿನ ಸಚಿವ ಸಂಪುಟದ ನಿರ್ಣಯಕ್ಕೆ ತಂದು ಪ್ರಾರಂಭಿಸುವುದು.
2. ಕಾರ್ಖಾನೆಯ ಯಂತ್ರೋಪಕರಣಗಳನ್ನು ದುರಸ್ತೀಕರಣಗೊಳಿಸಲು ತುರ್ತು ಅಗತ್ಯವಿರುವ ಹಣವನ್ನು ಸರ್ಕಾರದಿಂದ ಬಿಡುಗಡೆಗೊಳಿಸುವುದು.
3. ಕಾರ್ಖಾನೆಯ ಆಸ್ತಿಯ ಬೆಲೆ ಬಾಳುವುದಾಗಿದ್ದು, ಇದರ ಆಧಾರದ ಮೇಲೆ ಬಂಡವಾಳ ಪಡೆದು ನಡೆಸಬಹುದೇ ಎಂಬ ಬಗ್ಗೆ ಪರಿಶೀಲಿಸುವುದು.
4. ಈ ಹಿಂದೆ ಆಗಿರುವ ಲೋಪದೋಷಗಳನ್ನು ಗುರುತಿಸಿ ಸರಿಪಡಿಸಿಕೊಂಡು 2 ವರ್ಷಗಳ ಅವಧಿಗೆ ಪ್ರಾಯೋಗಿಕವಾಗಿ ಸರ್ಕಾರಿ ಸ್ವಾಮ್ಯದಲ್ಲಿ ನಡೆಸುವ ಬಗ್ಗೆ 03 ತಿಂಗಳೊಳಗಾಗಿ ತಾಂತ್ರಿಕ ವರದಿಯನ್ನು ಪಡೆದು ಸಚಿವ ಸಂಪುಟದಲ್ಲಿ ಮಂಡಿಸಿ, ಕಾರ್ಖಾನೆಯನ್ನು ಪ್ರಾರಂಭ ಮಾಡಲು ತೀರ್ಮಾನಿಸುವುದು.</td></tr>
<tr><td>(ಇ)</td><td>ಹಾಗಿದಲ್ಲಿ, ಸದರಿ ಸಭೆಯಲ್ಲಿ ಸರ್ಕಾರವು ಕೈಗೊಂಡಿರುವ ನಿರ್ಣಯಗಳೇನು;</td></tr>
</table>

(ಈ)	ಸದರಿ ಸಭೆಯ ನಿರ್ಣಯದಂತೆ ಕಾರ್ಖಾನೆ ಪುನರಾರಂಭಿಸಲು ಸರ್ಕಾರ ಇದುವರೆಗೂ ಕೈಗೊಂಡಿರುವ ಕ್ರಮಗಳೇನು?	ಮೈಸೂರು ಸಕ್ಕರೆ ಕಾರ್ಖಾನೆಯನ್ನು ಪುನಶ್ಚೇತನಗೊಳಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ. 1. ಮೈಸೂರು ಸಕ್ಕರೆ ಕಾರ್ಖಾನೆಯನ್ನು ಎರಡು ವರ್ಷಗಳ ಅವಧಿಗೆ ಪ್ರಾಯೋಗಿಕವಾಗಿ ಸರ್ಕಾರಿ ಸ್ವಾಮ್ಯದಲ್ಲೇ ನಡೆಸಲು ದಿನಾಂಕ:18.10.2021ರಂದು ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯಲ್ಲಿ ತೀರ್ಮಾನಿಸಲಾಗಿದೆ. 2. ಮೈಸೂರು ಸಕ್ಕರೆ ಕಾರ್ಖಾನೆಯನ್ನು ಸರ್ಕಾರಿ ಸ್ವಾಮ್ಯದಲ್ಲಿ ನಡೆಸುವ ಸಂಬಂಧ ವರದಿಯನ್ನು ಪಡೆಯಲು ಸರ್ಕಾರದ ಆದೇಶ ಸಂಖ್ಯೆ: ಸಿಐ 334 ಸಿಓಎಫ್ 2021 ದಿನಾಂಕ:03.12.2021ರಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ತಾಂತ್ರಿಕ ಸಲಹಾ ಸಮಿತಿಯನ್ನು ರಚಿಸಿ ಆದೇಶಿಸಲಾಗಿದೆ. 3. ಮೈಸೂರು ಸಕ್ಕರೆ ಕಾರ್ಖಾನೆಯನ್ನು ಪುನಶ್ಚೇತನಗೊಳಿಸುವ ಸಂಬಂಧ ಆಡಳಿತ, ಹಣಕಾಸು ಮತ್ತು ತಾಂತ್ರಿಕ ವಿಷಯಗಳಲ್ಲಿ ವರದಿಯನ್ನು ಪಡೆಯಲು ಮತ್ತು Operation and maintain (ಓ ಅಂಡ್ ಎಂ) ಆಧಾರದ ಮೇಲೆ ಕಾರ್ಖಾನೆಯನ್ನು ನಡೆಸುವ ಕುರಿತು ಟೆಂಡರ್ ಡಾಕ್ಯುಮೆಂಟ್ ಅನ್ನು ಸಿದ್ಧಪಡಿಸುವುದಕ್ಕಾಗಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ಮತ್ತು ನಿಯಮಗಳು 2000ರಡಿಯಲ್ಲಿ 14 ದಿನಗಳ ಅಲ್ಪಾವಧಿ ಟೆಂಡರ್ ಕರೆದು ಕನ್ಸಲ್ಟೆನ್ಸಿ ಸೇವೆಯನ್ನು ಪಡೆಯಲು ಆದೇಶ ಸಂಖ್ಯೆ: ಸಿಐ 326 ಸಿಓಎಫ್ 2021 ದಿನಾಂಕ: 02.12.2021ರಲ್ಲಿ ಸರ್ಕಾರದ ಅನುಮತಿಯನ್ನು ನೀಡಲಾಗಿರುತ್ತದೆ. 4. ಅದರಂತೆ, ದಿ ಮೈಸೂರು ಷುಗರ್ ಕಂಪನಿ ಮಂಡ್ಯ ಇವರ ಅಲ್ಪಾವಧಿ ಟೆಂಡರ್ ಪ್ರಕಟಣೆ ಸಂಖ್ಯೆ: MSCO/AC/CFO/147/2021-22 ದಿನಾಂಕ: 31.12.2021ರಂದು 14 ದಿನಗಳ ಅಲ್ಪಾವಧಿ ಟೆಂಡರ್ ಅನ್ನು ಆಹ್ವಾನಿಸಲಾಗಿತ್ತು. ಆದರೆ ಈ ಟೆಂಡರ್ ಪ್ರಕ್ರಿಯೆಯಲ್ಲಿ ಯಾವುದೇ ಬಿಡ್ಡುಗಳು ಸ್ವೀಕೃತಗೊಂಡಿರುವುದಿಲ್ಲ. ಮರು ಟೆಂಡರ್ ಆಹ್ವಾನಿಸಲು ಸಮಯದ ಅಭಾವವಿರುವುದರಿಂದ ಸಕ್ಕರೆ ಉದ್ದಿಮೆಗಳಿಗೆ ತಾಂತ್ರಿಕ ವರದಿಯನ್ನು ತಯಾರಿಸುವ ಕನ್ಸಲ್ಟೆನ್ಸಿ ಸಂಸ್ಥೆಗಳಿಂದ ಸೇವೆಯನ್ನು ಪಡೆಯಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪಾರದರ್ಶಕ ಅಧಿನಿಯಮ 1999 ರಡಿಯಲ್ಲಿ 4ಜಿ ವಿನಾಯಿತಿ ನೀಡುವಂತೆ ಮುಖ್ಯ ಹಣಕಾಸು ಅಧಿಕಾರಿ, ದಿ ಮೈಸೂರು ಷುಗರ್ ಕಂಪನಿ ಮಂಡ್ಯ ಇವರು ದಿನಾಂಕ:03.02.2022ರಂದು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಸದರಿ ಪ್ರಸ್ತಾವನೆಯು ಪ್ರಸ್ತುತ ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ.

ಸಂಖ್ಯೆ: ಸಿಐ 37 ಸಿಓಎಫ್ 2022

(ಶಂಕರ.ಬ.ಪಾಟೀಲ ಮುನೇನಕೊಪ್ಪ)
ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು